RNU AIR DHARWAD

# JULY 19, 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಕೇಂದ್ರ ಸರ್ಕಾರ, ತನಿಖಾ ಸಂಸ್ಥೆಗಳನ್ನು ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ– ಕಂದಾಯ ಸಚಿವ ಕೃ ್ಣ ಬೈರೇಗೌಡ ಆರೋಪ.

- ಸರ್ಕಾರಿ ಆಸ್ತಿಗಳ ನಗದೀಕರಣದ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿಲ್ಲ– ವಿಧಾನ ಪರಿಷತ್ ಸಭಾ ನಾಯಕ ಬೋಸರಾಜು ಸ್ಪಷ್ಟನೆ.

- ಭಾರತೀಯ ಆರ್ಥಿಕತೆ ಅಭಿವೃದ್ಧಿಯಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪಾತ್ರ ಅನನ್ಯ– ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಮತ.

- ರಾಜ್ಯದ ವಿವಿಧೆಡೆ ಮುಂದುವರಿದ ವರುಣನ ಆರ್ಭಟ: ಅಪಾಯದ ಮಟ್ಟ ತಲುಪಿದ ಹಲವು ನದಿ, ಜಲಾಶಯಗಳು.

ಈಗ ವಾರ್ತೆಗಳ ವಿವರ

*******

ಕೇಂದ್ರ ಸರ್ಕಾರ, ತನಿಖಾ ಸಂಸ್ಥೆಗಳನ್ನು ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ; ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಬುಡಮೇಲು ಮಾಡುವ ಪ್ರಯತ್ನ ಮಾಡುತ್ತಿದೆ ಎಂದು ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ ಆರೋಪಿಸಿದ್ದಾರೆ.

ವಿಧಾನಸೌಧದಲ್ಲಿ ನಿನ್ನೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ, ಸುದ್ದಿಗೋಷ್ಠಿ ನಡೆಸಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಬಹುಕೋಟಿ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ, ತಪ್ಪಿತಸ್ಥರನ್ನು ಹುಡುಕುವ ಬದಲು, ತನಿಖೆಯ ನೆಪದಲ್ಲಿ ರಾಜ್ಯ ಸರ್ಕಾರದ ವಿರುದ್ಧ ದಾಳಿ ನಡೆಸುವ ಕೆಲಸ ಮಾಡುತ್ತಿದೆ. ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿ ಪಡಿಸುವ ಉದ್ದೇಶ ಹೊಂದಿಲ್ಲ ಎಂದು, ಟೀಕಿಸಿದರು.

ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಈ ವರೆಗೆ 121 ಜನ ವಿಪಕ್ಷದ ಜನಪ್ರತಿನಿಧಿಗಳ ಮೇಲೆ ದಾಳಿ ನಡೆಸಲಾಗಿದೆ. ಬಿಜೆಪಿ ಜನ ಪ್ರತಿನಿಧಿಗಳ ಮೇಲೆ ಭ್ರ ಷ್ಟಾಚಾರ ಆರೋಪಗಳಿದ್ದರೂ ಸಹ ತನಿಖೆ ನಡೆಸುತ್ತಿಲ್ಲ ಎಂದರು.

*******

ನಿವೃತ್ತ ನೌಕರರಿಗೆ ಹಳೆ ಪಿಂಚಣಿ ವ್ಯವಸ್ಥೆ–ಒಪಿಎಸ್ ಮುಂದುವರೆಸುವ ಕುರಿತಂತೆ ಸರ್ಕಾರಕ್ಕೆ ವರದಿ ಬಂದ ನಂತರ ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.

ವಿಧಾನಪರಿ ‍ತ್ತಿನಲ್ಲಿ ನಿನ್ನೆ ಬಿಜೆಪಿ ಸದಸ್ಯ ಎಸ್.ವಿ.ಸಂಕನೂರು ಅವರ ಪ್ರಶ್ನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಉತ್ತರಿಸಿದ ಅವರು, ಸರ್ಕಾರ ಒಪಿಎಸ್ ಜಾರಿ ಸಂಬಂಧ ಸಮಿತಿಯೊಂದನ್ನು ರಚಿಸಿದ್ದು, ವರದಿ ಬಂದ ಬಳಿಕ ಸಾಧಕ–ಬಾಧಕಗಳನ್ನು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

*******

ಸರ್ಕಾರಿ ಆಸ್ತಿಗಳ ನಗದೀಕರಣದ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿಲ್ಲ ಎಂದು, ವಿಧಾನ ಪರಿಷತ್ ಸಭಾ ನಾಯಕ ಬೋಸರಾಜು ಸ್ಪಷ್ಟಪಡಿಸಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಉತ್ತರಿಸಿದ ಸಚಿವರು, ರಾಜ್ಯದ ಆರ್ಥಿಕ ಸ್ಥಿತಿ ಸುದೃಢವಾಗಿದೆ. ಪಂಚ ಖಾತ್ರಿ ಯೋಜನೆಗಳಿಗೆ ಸಂಪನ್ಮೂಲ ಕ್ರೋಢೀಕರಣ ಹಾಗೂ ಹೆಚ್ಚು ಆದಾಯ ತರುವ, ಕಾರ್ಯಕ್ರಮ ರೂಪಿಸಲಾಗುತ್ತಿದ್ದು, ಆರ್ಥಿಕ ಇಲಾಖೆ ಮಾಹಿತಿ ಸಂಗ್ರಹಕ್ಕಾಗಿ ಆಸ್ತಿಗಳ ವಿವರ ಪಡೆಯುತ್ತಿದೆ. ಇದು ನಿರಂತರ ಪ್ರಕ್ರಿಯೆ, ಎಂದರು.

*******

ಪ್ರಸಕ್ತ ಅಧಿವೇಶನ ಅನಿರ್ಧಿಷ್ಟಾವಧಿ ಮುಂದೂಡುವ ಮೊದಲು, ದಕ್ಷಿಣಕನ್ನಡ ಜಿಲ್ಲೆಯ, ಪ್ರಖ್ಯಾತ ಕ್ರೀಡೆ ಕಂಬಳದ ಆಯೋಜಕರಿಗೆ, ಅನುದಾನ ಬಿಡುಗಡೆ ಮಾಡುವುದಾಗಿ, ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ ಭರವಸೆ ನೀಡಿದ್ದಾರೆ.

ವಿಧಾನಸಭೆಯಲ್ಲಿ, ಸದಸ್ಯ ಪ್ರತಾಪ್ ಸಿಂಹ ನಾಯಕ್ ಅವರು, 2023–24ನೇ ಸಾಲಿನ ಕಂಬಳದ ಆಯೋಜಕರಿಗೆ, ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ ಎಂದು ಸರ್ಕಾರದ ಗಮನ ಸೆಳೆದರು.

ಇದಕ್ಕೆ ಉತ್ತರಿಸಿದ ಸಚಿವರು, ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದೆ. ತಕ್ಷಣವೇ ಅನುದಾನ ಬಿಡುಗಡೆ ಮಾಡಲು ಇಲಾಖೆ ಕಾರ್ಯದರ್ಶಿಗೆ ಸೂಚಿಸಿದರು.

ಪುತ್ತೂರಿನ ಕೋಟೆಯ ಚೆನ್ನಯ್ಯ ಅವರಿಗೆ 5 ಲಕ್ಷ, ಜೋಡಿ ಚೆನ್ನಯ್ಯ ಅವರಿಗೆ 10 ಲಕ್ಷ ಅನುದಾನವನ್ನು ಆದ ಷ್ಟು ಶೀಘ್ರ ಬಿಡುಗಡೆ ಮಾಡಲಾಗುತ್ತದೆ ಎಂದು ಸಚಿವರು ತಿಳಿಸಿದರು.

*******

ರಾಜ್ಯದ 59 ರೈಲು ನಿಲ್ದಾಣಗಳ ಪೈಕಿ, 54 ಅನ್ನು ಮೇಲ್ದರ್ಜೆಗೇರಿಸಲು, ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದೆ ಎಂದು, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಚಿಕ್ಕಮಗಳೂರು ರೈಲ್ವೆ ನಿಲ್ದಾಣಕ್ಕೆ ನಿನ್ನೆ ಭೇಟಿ ನೀಡಿ, ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಮಂಗಳೂರು ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು, 321 ಕೋಟಿ ರೂಪಾಯಿ, ಚಿಕ್ಕಮಗಳೂರು ರೈಲ್ವೆ ನಿಲ್ದಾಣದ ಉನ್ನತೀಕರಣಕ್ಕೆ, 26 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

“ಮೇಕ್ ಇನ್ ಇಂಡಿಯಾ” ಪರಿಕಲ್ಪನೆ, ಜಾಗತಿಕ ಮಟ್ಟದಲ್ಲಿ ದೇಶದ ಆರ್ಥಿಕತೆಯನ್ನು ಸಮರ್ಥವಾಗಿ ಮುನ್ನಡೆಸುತ್ತಿದೆ ಎಂದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ, ಅವಲೋಕಿಸಿರುವ ಅವರು, ಭಾರತದ ಡಿಜಿಟಲ್ ಪಾವತಿ ಯು.ಪಿ.ಐ. ವ್ಯವಸ್ಥೆ, ಎಲ್ಲರ ಗಮನ ಸೆಳೆದಿದ್ದು, ಡಿಜಿಟಲ್ ವಹಿವಾಟು ಕ್ರಾಂತಿಗೆ ಇದು ಮುನ್ನುಡಿಯಾಗಿದೆ. ಇಂತಹ ಹಲವು ಯಶೋಗಾಥೆಗಳು “ಮೇಡ್ ಇನ್ ಇಂಡಿಯಾ” ವಸ್ತುಗಳು ಜಾಗತಿಕ ಇ–ಕಾಮರ್ಸ್ ಮಾರುಕಟ್ಟೆಗಳಲ್ಲಿ, ಭಾರತದ ಸಮರ್ಥ ಪಾಲುದಾರಿಕೆ ಸಾಕ್ಷಿಕರಿಸುತ್ತದೆ ಎಂದು, ಪ್ರಧಾನಿ ಶ್ಲಾಘಿಸಿದ್ದಾರೆ.

*******

ಭಾರತೀಯ ಆರ್ಥಿಕತೆ ಅಭಿವೃದ್ಧಿಯಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಪಾತ್ರ ಅನನ್ಯ ಎಂದು ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ಬೆಳಗಾವಿಯಲ್ಲಿ ನಿನ್ನೆ ನಡೆದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 24ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶ ಇತ್ತೀಚಿನ ದಿನಗಳಲ್ಲಿ ವಿಜ್ಞಾನ ತಂತ್ರಜ್ಞಾನ ಕೈಗಾರಿಕೆ ಹಾಗೂ ಕೃಷಿ ಕ್ಷೇತ್ರಗಳಲ್ಲಿ ಗಣನೀಯ ಪ್ರಗತಿ ಸಾಧಿಸುತ್ತಿದೆ. ಮೇಕ್ ಇನ್ ಇಂಡಿಯಾ ಗುರಿಸಾಧನೆಯಲ್ಲಿ ಶಿಕ್ಷಣ ವಲಯ ಹಾಗೂ ವಿಶ್ವವಿದ್ಯಾಲಯಗಳ ಪಾತ್ರ ಮಹತ್ವದ್ದಾಗಿದೆ ಎಂದರು.

ಘಟಿಕೋತ್ಸವದಲ್ಲಿ ಚಿಕ್ಕಬಳ್ಳಾಪುರದ ಶ್ರೀ ಸತ್ಯಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಮಧುಸೂಧನ್ ಸಾಯಿ, ಇಸ್ರೋ ಅಧ್ಯಕ್ಷ ಡಾಕ್ಟರ್ ಎಸ್.ಸೋಮನಾಥ್, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ವ್ಯವಸ್ಥಾಪಕ ನಿರ್ದೇಶಕ ಹರಿ.ಕೆ.ಮರಾರ್ ಅವರಿಗೆ ಡಾಕ್ಟರ್ ಆಫ್ ಸೈನ್ಸ್ ಗೌರವ ಪದವಿ ಪ್ರದಾನ ಮಾಡಲಾಯಿತು.

*******

ರಾಜ್ಯದ ವಿವಿಧೆಡೆ ವರುಣನ ಆರ್ಭಟ ಮುಂದುವರಿದಿದ್ದು, ಹಲವು ನದಿ, ಜಲಾಶಯಗಳು ಅಪಾಯದ ಮಟ್ಟ ತಲುಪಿವೆ.

ಯಾದಗಿರಿ ಜಿಲ್ಲೆ, ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದ, 21 ಕ್ರಸ್ಟ್‌ಗೇಟ್‌ಗಳನ್ನು ತೆರೆದು, ಕೃಷ್ಣ ನದಿಗೆ 62 ಸಾವಿರದ 680 ಕ್ಯುಸೆಕ್ ನೀರನ್ನು ಹರಿಬಿಡಲಾಗಿದೆ. ಜಲಾಶಯಕ್ಕೆ ಹೊಂದಿಕೊಂಡಿರುವ ಆರ್.ಎನ್.ಎಸ್. ಖಾಸಗಿ ಜಲ ವಿದ್ಯುತ್ ಸ್ಥಾವರದಿಂದಲೂ, ನದಿಗೆ ನೀರು ಹರಿಸಲಾಗುತ್ತಿದೆ. ನದಿ ತೀರದ ಗ್ರಾಮಗಳ ಜನರು ಮುಂಜಾಗ್ರತೆವಹಿಸುವಂತೆ ಮತ್ತು ತಮ್ಮ ಜಾನುವಾರುಗಳ ಸಮೇತ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಮುಖ್ಯ ಎಂಜಿನಿಯರ್ ಆರ್. ಮಂಜುನಾಥ ಮನವಿ ಮಾಡಿದ್ದಾರೆ.

ಹಾವೇರಿ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ತುಂಗಭದ್ರಾ, ವರದಾ, ಕುಮದ್ವತಿ ನದಿಗಳು, ಅಪಾಯ ಮಟ್ಟದಲ್ಲಿ ಹರಿಯುತ್ತಿವೆ.

ಜಿಲ್ಲೆಯ ಕಳಸೂರು, ಸಂಗೂರು, ದೇವಗಿರಿ ಹಾಗೂ ಸುತ್ತಮುತ್ತ ವರದಾ ನದಿಗೆ ನಿರ್ಮಿಸಲಾಗಿರುವ ಬ್ಯಾರೇಜ್‌ಗಳು ಸಂಪೂರ್ಣ ಮುಳುಗಡೆಯಾಗಿದ್ದು, ಇತಿಹಾಸ ಪ್ರಸಿದ್ಧ ಪ್ರವಾಸಿ ತಾಣ, ಮದಗ ಮಾಸೂರು ಜಲಪಾತ, ಧುಮ್ಮಿಕ್ಕಿ ಹರಿಯುತ್ತಿದೆ. ನದಿ ನೀರನ್ನು ಕೆರೆಗಳಿಗೆ ತುಂಬಿಸುವ ಕಾರ್ಯ ಭರದಿಂದ ಸಾಗಿದೆ.

ಮುಂಜಾಗ್ರತೆ ನಿರ್ಲಕ್ಷಿಸಿ, ವರದಾ ನದಿಯಲ್ಲಿ ಮೀನು ಹಿಡಿಯಲು ಹೋಗಿದ್ದ ಜಿಲ್ಲೆಯ ಹಂದಿಗನೂರಿನ, 25 ವ ರ್ಷದ ಗಾಳೆಪ್ಪ ಸುರೇಶ ಮೇಲಿನಮನಿ ನೀರಿನಲ್ಲಿ ಕೊಚ್ಚಿ ಹೋಗಿ, ಮೃತಪಟ್ಟಿದ್ದಾಗಿ ಪೊಲೀಸರು ತಿಳಿಸಿದ್ದಾರೆ.

ಕೊಡಗು ಜಿಲ್ಲೆಯ ಹಾರಂಗಿ ಜಲಾಶಯಕ್ಕೆ, 11 ಸಾವಿರ ಕ್ಯೂಸೆಕ್‌ನಷ್ಟು ಒಳಹರಿವಿದ್ದು, ಜಲಾಶಯದಿಂದ ನದಿಗೆ 10 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ.

ಮಡಿಕೇರಿ – ವಿರಾಜಪೇಟೆ ರಸ್ತೆಯ, ಬೇತ್ರಿ ಸೇತುವೆ ತಳದಲ್ಲಿ ಕಾವೇರಿ ನದಿ, ಅಪಾಯದ ಮಟ್ಟದಲ್ಲಿ ಹರಿಯುತ್ತಿದ್ದು, ಭಾಗಮಂಡಲದಲ್ಲಿಯೂ ಕಾವೇರಿ ಪ್ರವಾಹ ಸ್ಥಿತಿಯಲ್ಲಿದೆ. ಜಿಲ್ಲೆಯಲ್ಲಿ ಲಕ್ಷ್ಮಣತೀರ್ಥ ನದಿ ಸಹ ಉಕ್ಕಿ ಹರಿಯುತ್ತಿದೆ.

ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿರುವ ಹಿನ್ನೆಲೆ, ಇಂದು ಕೂಡ ಅಂಗನವಾಡಿ ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ನೀಡಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಪ್ರಕೃತಿ ವಿಕೋಪ ಪರಿಸ್ಥಿತಿ ನಿಭಾಯಿಸಲು ಜಿಲ್ಲಾಡಳಿತ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ ಎಂದು ನಮ್ಮ ಕೊಡಗು ಪ್ರತಿನಿಧಿ ಅನಿಲ್ ಹೆಚ್.ಟಿ ವರದಿ ಮಾಡಿದ್ದಾರೆ.

ಉತ್ತರಕನ್ನಡ ಜಿಲ್ಲೆ, ಕುಮಟಾ ತಾಲೂಕಿನ ಬರ್ಗಿಯ ರಾಷ್ಟ್ರೀಯ ಹೆದ್ದಾರಿ 66 ರಲ್ಲಿ, ನಿನ್ನೆ ಬೆಳಗಿನ ಜಾವ, ಭಾರೀ ಪ್ರಮಾಣದಲ್ಲಿ ಗುಡ್ಡ ಕುಸಿದಿದ್ದು, ವಾಹನ ಸಂಚಾರ ಸ್ಥಗಿತಗೊಂಡಿದೆ.

ಅನಮೋಡ್–ಗೋವಾ ರಾಷ್ಟ್ರೀಯ ಹೆದ್ದಾರಿಯಲ್ಲಿ, ರಾಜ್ಯದ ಗಡಿಯಿಂದ ಸುಮಾರು 12 ಕಿಲೋ ಮೀಟರ್ ದೂರದ, ಗೋವಾ ವ್ಯಾಪ್ತಿಯ ದೂಧ್ ಸಾಗರ್ ಸ್ವಾಮಿ ದೇವಸ್ಥಾನದ ಹತ್ತಿರ, ಭೂಕುಸಿತ ಉಂಟಾಗಿದೆ.

ಅಂಕೋಲಾ ತಾಲೂಕಿನ ಶಿರೂರಿನಲ್ಲಿ ಗುಡ್ಡ ಕುಸಿತದ ಅವಘಡದಲ್ಲಿ, 6 ವರ್ಷದ ಬಾಲಕಿ ಆವಂತಿಕಾ ನಾಯ್ಕ ಮತ್ತು ಟ್ಯಾಂಕರ್ ಚಾಲಕನ ಮೃತದೇಹ ಪತ್ತೆಯಾಗಿದೆ. ದುರ್ಘಟನೆಯಲ್ಲಿ ಒಟ್ಟು ಆರು ಮಂದಿ ಸಾವನ್ನಪ್ಪಿದ್ದು, ಹಲವರು ಕಣ್ಮರೆಯಾಗಿರುವ ಸಾಧ್ಯತೆ ಹಿನ್ನೆಲೆ, ಎನ್.ಡಿ.ಆರ್.ಎಫ್ ತಂಡ ಶೋಧ ಕಾರ್ಯ ಮುಂದುವರೆಸಿದೆ.

ಎರಡು ಗ್ಯಾಸ್ ಟ್ಯಾಂಕರ್‌ಗಳು ನದಿಗೆ ಉರುಳಿದ್ದು, ಸೋರಿಕೆಯಾಗುವ ಆತಂಕದ ಹಿನ್ನೆಲೆ, ಅಕ್ಕಪಕ್ಕದ ಗ್ರಾಮಸ್ಥರನ್ನು, ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ.

ಉತ್ತರಕನ್ನಡ ಜಿಲ್ಲೆ, ಶಿರಸಿ ತಾಲೂಕಿನಾದ್ಯಂತ ಧಾರಾಕಾರ ಮಳೆಯಾಗುತ್ತಿದ್ದು, ಹಳ್ಳ, ಕೊಳ್ಳಗಳಲ್ಲಿ ನೀರು ತುಂಬಿ ಹರಿಯುತ್ತಿದೆ. ಕೆಲ ಪ್ರದೇಶದಲ್ಲಿ ಭೂ ಕುಸಿತ ಉಂಟಾಗುವ ಸಾಧ್ಯತೆಯಿದೆ. ಜಲಪಾತ ಮತ್ತು ಅರಣ್ಯ ಪ್ರದೇಶದ ಪ್ರವಾಸಿ ತಾಣಗಳಿಗೆ ಸಾರ್ವಜನಿಕರು ತೆರಳುವುದನ್ನು, ಜಿಲ್ಲಾಡಳಿತ ನಿರ್ಬಂಧಿಸಿದೆ.

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ತುಂಗಾ, ಭದ್ರಾ, ಹೇಮಾವತಿ ನದಿ ಸೇರಿದಂತೆ ನದಿಗಳು ಅಪಾಯಕಾರಿ ಮಟ್ಟ ಮೀರಿ ಹರಿಯುತ್ತಿವೆ. ಸಾರ್ವಜನಿಕರು, ಪ್ರವಾಸಿಗರು ನದಿಗಳಿಗೆ ಅಥವಾ ತಗ್ಗು ಪ್ರದೇಶಗಳಿಗೆ ಇಳಿಯಬಾರದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಶಿವಮೊಗ್ಗ ಸೇರಿದಂತೆ ರಾಜ್ಯದ ಐದು ಜಿಲ್ಲೆಗಳಲ್ಲಿ ಇಂದು ಮತ್ತೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಶಿವಮೊಗ್ಗ, ಚಿಕ್ಕಮಗಳೂರು, ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕೊಡಗು ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಇರಲಿದೆ. ಬೆಳಗಾವಿ, ಹಾವೇರಿ ಮತ್ತು ಹಾಸನ ಜಿಲ್ಲೆಗಳಲ್ಲಿ ಯಲ್ಲೋ ಅಲರ್ಟ್ ಪ್ರಕಟಿಸಲಾಗಿದೆ.

*******

ಕೇಂದ್ರ ಸರ್ಕಾರದ  ಮಹತ್ವಾಕಾಂಕ್ಷಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ  ಎರಡನೇ ಆವೃತ್ತಿಯ ಜಲ ಸಂಜೀವಿನಿ ಅನುಷ್ಠಾನಕ್ಕಾಗಿ, ರಾಜ್ಯದ 8 ಜಿಲ್ಲೆಗಳ, 8 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶೈಲಾ ದಿಡ್ಡಿಮನಿ ತಿಳಿಸಿದ್ದಾರೆ.

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಕೇಂದ್ರ ಸರ್ಕಾರ, ತನಿಖಾ ಸಂಸ್ಥೆಗಳನ್ನು ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ– ಕಂದಾಯ ಸಚಿವ ಕೃ ್ಣ ಬೈರೇಗೌಡ ಆರೋಪ.

ಸರ್ಕಾರಿ ಆಸ್ತಿಗಳ ನಗದೀಕರಣದ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿಲ್ಲ– ವಿಧಾನ ಪರಿಷತ್ ಸಭಾ ನಾಯಕ ಬೋಸರಾಜು ಸ್ಪಷ್ಟನೆ.

ಭಾರತೀಯ ಆರ್ಥಿಕತೆ ಅಭಿವೃದ್ಧಿಯಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪಾತ್ರ ಅನನ್ಯ– ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಮತ.

ರಾಜ್ಯದ ವಿವಿಧೆಡೆ ಮುಂದುವರಿದ ವರುಣನ ಆರ್ಭಟ: ಅಪಾಯದ ಮಟ್ಟ ತಲುಪಿದ ಹಲವು ನದಿ, ಜಲಾಶಯಗಳು.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

******